5) ಸರ್ಕಾರಿ ಪಾಲಿಟೆಕ್ನಿಕ್, ಗುಲ್ಬರ್ಗಾ
6) ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ
7) ಸರ್ಕಾರಿ ಪಾಲಿಟೆಕ್ನಿಕ್, ಬೀದರ್
8) ಕರ್ನಾಟಕ ಪಾಲಿಟೆಕ್ನಿಕ್, ಮಂಗಳೂರು

**ಅನುದಾನಿತ ಪಾಲಿಟೆಕ್ನಿಕ್‌ಗಳು :**

1) ಜೆ. ಎಸ್. ಎಸ್. ಪಾಲಿಟೆಕ್ನಿಕ್, ಮೈಸೂರು
2) ಬಿ ವಿ ವಿ ಸಂಘ ಪಾಲಿಟೆಕ್ನಿಕ್, ಬಾಗಲಕೋಟೆ

ಈ ಯೋಜನೆಯಲ್ಲಿ ಆಯ್ಕೆಗೊಂಡ ಪಾಲಿಟೆಕ್ನಿಕ್‌ಗಳನ್ನು ಮಾದರಿ ಸಂಸ್ಥೆಯನ್ನಾಗಿ ಅಭಿವೃದ್ಧಿಗೊಳಿಸಿ ಇವುಗಳಿಂದ ಆಯಾ ಕ್ಷೇತ್ರದಲ್ಲಿ ಇರುವ ಇತರೇ ಪಾಲಿಟೆಕ್ನಿಕ್‌ಗಳು ಪ್ರಯೋಜನ ಪಡೆಯಬಹುದಾಗಿದೆ.

ಇ) ಪ್ರಸ್ತಾವನೆಯು ಕೇಂದ್ರ ಸರ್ಕಾರದ ಪರಿಶೀಲನೆಯಲ್ಲಿದೆ. ಶ್ರೀಯುತ ಬಸವರಾಜ ರಾಯರೆಡ್ಡಿ ಲೋಕಸಭಾ ಸದಸ್ಯರು ಹಾಗೂ ರಾಜ್ಯ ಸರ್ಕಾರದ ಪ್ರತಿನಿಧಿರವರು ಕೇಂದ್ರ ಸರ್ಕಾರದ ಅನುಮೋದನೆಗಾಗಿ ಪ್ರಯತ್ನಿಸುತ್ತಿದ್ದಾರೆ.

## ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದಲ್ಲಿ ಶಾಲಾ ಕೊಠಡಿಗಳ ಕೊರತೆ

1016 (1387)

**ಶ್ರೀ ಜಗದೀಶ ಶೆಟ್ಟರ್** (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಕಳೆದ ಮೂರು ವರ್ಷಗಳಲ್ಲಿ ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಮಂಜೂರಾದ ನೂತನ ಕೊಠಡಿಗಳ ಮತ್ತು ಶೌಚಾಲಯಗಳ ಸಂಖ್ಯೆ ಎಷ್ಟು?

ಆ ) ಇನ್ನು ಎಷ್ಟು ಶಾಲೆಗಳಿಗೆ ಎಷ್ಟು ಕೊಠಡಿಗಳ ಅವಶ್ಯಕತೆ ಇದೆ ಹಾಗೂ ಶೌಚಾಲಯಗಳ ವ್ಯವಸ್ಥೆ ಇಲ್ಲದ ಶಾಲೆಗಳ ಸಂಖ್ಯೆ ಎಷ್ಟು ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

**ಶ್ರೀ ಹೆಚ್. ಬಿ. ಗೋವಿಂದಗೌಡ** (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಹೊಸ ಕೊಠಡಿಗಳು ಹಾಗೂ ಶೌಚಾಲಯಗಳು ಈ ಕೆಳಕಂಡಂತಿವೆ :

| ಹಂತ | ಕೊಠಡಿಗಳು | ಶೌಚಾಲಯಗಳು |
|---|---|---|
| ಪ್ರಾಥಮಿಕ ಶಾಲೆಗಳು | 136 | 04 |
| ಪ್ರೌಢ ಶಾಲೆಗಳು | 01 | 02 |

ಆ) 13 ಪ್ರಾಥಮಿಕ ಶಾಲೆಗಳಿಗೆ 16 ಕೊಠಡಿಗಳ ಅವಶ್ಯಕತೆ ಇದೆ.

3 ಪ್ರೌಢ ಶಾಲೆಗಳಿಗೆ 24 ಕೊಠಡಿಗಳ ಅವಶ್ಯಕತೆ ಇದೆ.

100 ಪ್ರಾಥಮಿಕ ಶಾಲೆಗಳು ಮತ್ತು 3 ಪ್ರೌಢ ಶಾಲೆಗಳಲ್ಲಿ ಶೌಚಾಲಯ ವ್ಯವಸ್ಥೆ ಇರುವುದಿಲ್ಲ.

ಹಂತ ಹಂತವಾಗಿ ಈ ಶಾಲೆಗಳಿಗೆ ಶಾಲಾ ಕೊಠಡಿಗಳನ್ನು ಮತ್ತು ಶೌಚಾಲಯಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾರಂಭಿಸಲಾದ ಪ್ರೌಢ ಶಾಲೆಗಳು

1018 (1382)

**ಶ್ರೀ. ಕುಂಬೈ ಸುಂದರರಾವ್** (ಸುರತ್ಕಲ್) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) 1996-99 ಅವಧಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾರಂಭಿಸಲಾದ ಪ್ರೌಢಶಾಲೆಗಳ ಒಟ್ಟು ಸಂಖ್ಯೆ ಎಷ್ಟು ?

ಆ) ಈ ಎಲ್ಲಾ ಪ್ರೌಢ ಶಾಲೆಗಳಿಗೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆಯೇ ?

ಇ) ಹಾಗಿಲ್ಲದಿದ್ದಲ್ಲಿ ಕೊರತೆ ಇರುವ ಸಿಬ್ಬಂದಿಗಳನ್ನು ತ್ವರಿತವಾಗಿ ನೇಮಕ ಮಾಡಿ ಕೊಡಲಾಗುವುದೇ?

**ಶ್ರೀ ಹೆಚ್. ಜಿ. ಗೋವಿಂದ ಗೌಡ** (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) 15

ಆ) ಹುದ್ದೆಗಳ ಮಂಜೂರಾತಿ ಮತ್ತು ಭರ್ತಿಯ ಬಗ್ಗೆ ವಿವರಗಳನ್ನು ಈ ಕೆಳಗೆ ನೀಡಿದೆ :

| | ಮಂಜೂರಾದ ಹುದ್ದೆಗಳು | ಭರ್ತಿ ಮಾಡಲಾದ ಹುದ್ದೆಗಳು |
|---|---|---|
| ಮುಖ್ಯ ಶಿಕ್ಷಕರು | 15 | 1 |
| ದೈಹಿಕ ಶಿಕ್ಷಕರು | 09 | - |
| ಸಹಶಿಕ್ಷಕರು | 66 | 49 |
| ಡಿ ದರ್ಜೆ ನೌಕರರು | 15 | 4 |
| ಒಟ್ಟು | 105 | 54 |

ಇ) ಹೌದು.

## ಉಡುಪಿ ಮತ್ತು ಮಂಗಳೂರು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರ ವ್ಯಾಪ್ತಿಗೆ ಬರುವ ವಲಯಗಳು

1019 (1383)

**ಶ್ರೀ ಕುಂಬೈ ಸುಂದರರಾವ್** (ಸುರತ್ಕಲ್) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ